**ಟಿ.ನರಸೀಪುರದ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯದಲ್ಲಿ**

**ಸಿ.ಸಿ. ನಂ.1244/2024**

| | |
|---|---|
| ಪಿರ್ಯಾದುದಾರರು : | ಶ್ರೀ ಕಿರಣ್ .ಟಿ,<br>ಬಿನ್.ತಿಮ್ಮೇಗೌಡ,<br>ಸುಮಾರು 36 ವರ್ಷ,<br>ವಾಸಃ ನಂ.9–14, ಹೊನ್ನೇಯನ ಗಲ್ಲಿ<br>ಹೊರಕೇರಿ ಬೀದಿ, ವಾರ್ಡ್ ನಂ.9,<br>ಬನ್ನೂರು ಟೌನ್ ಮತ್ತು ಹೋಬಳಿ,<br>ಟಿ.ನರಸೀಪುರ ತಾಲ್ಲೂಕು,<br>ಮೈಸೂರು ಜಿಲ್ಲೆ. |

–ವಿರುದ್ಧ–

| | |
|---|---|
| ಆರೋಪಿ : | ಶ್ರೀಮತಿ. ಮಾದೇವಮ್ಮ,<br>ಕೋಂ. ಲೇಟ್.ಚಿಕ್ಕರಾಜು,<br>ಸುಮಾರು 47 ವರ್ಷ,<br>ವಾಸಃ ಹೊರಕೇರಿ,<br>ಬನ್ನೂರು ಟೌನ್ ಮತ್ತು ಹೋಬಳಿ,<br>ಟಿ.ನರಸೀಪುರ ತಾಲ್ಲೂಕು,<br>ಮೈಸೂರು ಜಿಲ್ಲೆ. |

**ಭಾ ದಂ ಪ್ರ ಸಂ ಕಲಂ.313 ರ ಅಡಿಯಲ್ಲಿ ಆರೋಪಿಯ ಹೇಳಿಕೆ**

ಪ್ರ:1: ಈ ಮೊಕದ್ದಮೆಯಲ್ಲಿ ವಿಚಾರಣೆ ಆಗಿರುವ ಅಭಿಯೋಜನೆ ಪರ ಸಾಕ್ಷಿದಾರರ ಹೇಳಿಕೆಯನ್ನು ಕೇಳಿಸಿಕೊಂಡಿದ್ದೀರಾ?

ಉ:

ಪ್ರ:2: ಫ್ರಾಸಾ-1 ಶ್ರೀ ಕಿರಣ್ .ಟಿ, ಇವರು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯಾದ ನೀವು ಪಿರ್ಯಾದುದಾರರಿಂದ ದಿನಾಂಕ 11.04.2024 ರಂದು ರೂ.1,50,000/- ಹಣವನ್ನು ನಿಮ್ಮ ದರದ್ದು ನಿಮಿತ್ತ ಅಂದರೆ ನಿಮ್ಮ ಗೃಹ ಕೃತ್ಯದ ಖರ್ಚಿಗಾಗಿ ಹಾಗೂ ಕೈ ಸಾಲ ತೀರಿಸುವ ಸಲುವಾಗಿ ಸಾಲವನ್ನು ಪಡೆದಿದ್ದು, ಎರಡೂವರೆ ತಿಂಗಳ ಒಳಗಾಗಿ ಹಿಂದಿರುಗಿಸುವುದಾಗಿ ಒಪ್ಪಿ ಸದರಿ ಅವಧಿಯಲ್ಲಿ ಹಣವನ್ನು ಹಿಂದಿರುಗಿಸದ ಕಾರಣ ಸದರಿ ಸಾಲದ ಮರುಪಾವತಿಗಾಗಿ ರೂ.1,50,000/- ರಂತೆ ದಿನಾಂಕ 26.06.2024 ರ ದಿನಾಂಕವನ್ನು ನಮೂದಿಸಿದ ನಿಮ್ಮ ಬ್ಯಾಂಕ್ ಖಾತೆಯುಳ್ಳ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಬನ್ನೂರು ಶಾಖೆಯ ಚೆಕ್ ನಂ.092238 ನ್ನು ಅವರಿಗೆ ನೀಡಿರುವುದಾಗಿ ಹೇಳಿದ್ದಾರೆ. ಈ ಬಗ್ಗೆ ನಿಮಗೆ ಏನಾದರೂ ಹೇಳುವುದಿದೆಯೆ?

ಉಃ

ಪ್ರ:3: ಫ್ರಾಸಾ-1 ರವರು ಮುಂದುವರೆದು ಸಾಕ್ಷಿ ನುಡಿಯುತ್ತಾ ಅವರು ಸದರಿ ಚೆಕ್ಕನ್ನು ಪಿರ್ಯಾದುದಾರರು ತಮ್ಮ ಬಾಬ್ತು ಬ್ಯಾಂಕ್ ಆಫ್ ಬರೋಡಾ, ಕಗ್ಗಲೀಪುರ ಶಾಖೆಯ ಖಾತೆಗೆ ನಗದೀಕರಣಕ್ಕಾಗಿ ಸಲ್ಲಿಸಿದಾಗ, **'ಸಾಕಷ್ಟು ಹಣ ಇರುವುದಿಲ್ಲ (Funds Insufficient)'** ಎಂಬ ಮಾಹಿತಿಯೊಂದಿಗೆ ಚೆಕ್ ಅಮಾನ್ಯಗೊಂಡು ದಿನಾಂಕ 04.07.2024 ರಂದು ಸದರಿ ಚೆಕ್ಕು ವಾಪಸ್ಸು ಬಂದಿರುವುದಾಗಿ ಹೇಳಿದ್ದಾರೆ. ಈ ಬಗ್ಗೆ ನಿಮಗೆ ಏನಾದರೂ ಹೇಳುವುದಿದೆಯೆ?

ಉಃ

ಪ್ರ:4: ಫ್ರಾಸಾ-1 ರವರು ಮುಂದುವರೆದು ಸಾಕ್ಷಿ ನುಡಿಯುತ್ತಾ ನಂತರ ದಿನಾಂಕ 26.07.2024 ರಂದು ನಿಮಗೆ ವಕೀಲರ ಮುಖಾಂತರ ನೋಟೀಸು ಕಳಿಸಿ ಸಾಲದ ಹಣವನ್ನು ಮರುಪಾವತಿ ಮಾಡಬೇಕೆಂದು ಕೇಳಿದ್ದು, ಆದರೆ ನೀವು ಇದುವರೆಗೂ ಹಣವನ್ನು ಮರುಪಾವತಿ ಮಾಡಿರುವುದಿಲ್ಲ ಎನ್ನುವುದಾಗಿ ಹೇಳಿದ್ದಾರೆ. ಈ ಬಗ್ಗೆ ನಿಮಗೆ ಏನಾದರೂ ಹೇಳುವುದಿದೆಯೆ?

ಉಃ

ಪ್ರ:5:ಈ ಪ್ರಕರಣದ ವಿಚಾರವಾಗಿ ಏನಾದರೂ ಹೇಳುವುದು ಇದೆಯೆ?

ಉಃ

ಪ್ರ:6:ನಿಮ್ಮ ಪರವಾಗಿ ಯಾವುದಾದರೂ ಸಾಕ್ಷಿ ಅಥವಾ ದಾಖಲೆಗಳನ್ನು ಹಾಜರುಪಡಿಸುತ್ತೀರಾ?

ಉಃ

**[ಮೇಲ್ಕಂಡ ಆರೋಪಿಯ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ತೆರೆದ ನ್ಯಾಯಾಲಯದಲ್ಲಿ ಅವರಿಗೆ ಓದಿ ಹೇಳಿದ ನಂತರ ಉತ್ತರಗಳನ್ನು ಅವರು ಹೇಳಿದಂತೆ ದಾಖಲಿಸಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.]**

ದಿನಾಂಕಃ 11.02.2025.

**C/C ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.,**
**ಟಿ.ನರಸೀಪುರ.**